868(1461) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಾಮರಾಜನಗರವನ್ನು ಎಂದಿನಿಂದ ಹೊಸ ಜಿಲ್ಲೆಯೆಂದು ಘೋಷಿಸಲಾಗಿದೆ.

ಆ) ಹೊಸ ಜಿಲ್ಲೆಯ ನಂತರ ಯಾವ ಅಭಿವೃದ್ಧಿ ಕಾರ್ಯಗಳನ್ನು ಸರ್ಕಾರ ಘೋಷಿಸಿದೆ.

ಇ) ಸದರಿ ಅಭಿವೃದ್ಧಿ ಕಾರ್ಯಗಳು ಈಗ ಯಾವಹಂತದಲ್ಲಿವೆ (ವಿವರಗಳನ್ನು ನೀಡುವುದು)?

ಶ್ರೀ ಎಂ. ಪಿ. ಪ್ರಕಾಶ್ (ಕಂದಾಯ ಸಚಿವರು) :

ಅ) 15–08–1997ರಿಂದ ಹೊಸ ಜಿಲ್ಲೆ ಎಂದು ಘೋಷಿಸಲಾಗಿದೆ.

ಆ) ಕಂದಾಯ ಇಲಾಖೆ ಕಛೇರಿ ಆಧುನೀಕರಣ, ಜಿಲ್ಲಾಧಿಕಾರಿ ಉಪ ವಿಭಾಗಾಧಿಕಾರಿ, ತಹಶೀಲ್ದಾರರುಗಳ ವಸತಿ ಗೃಹಗಳ ನಿರ್ಮಾಣಕ್ಕಾಗಿ ಸರ್ಕಾರವು ಮಂಜೂರಾತಿ ನೀಡಿರುತ್ತದೆ. ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಅಧಿಕಾರಿಗಳ/ಸಿಬ್ಬಂದಿಗಳ ವಸತಿ ಗೃಹಗಳನ್ನು ನಿರ್ಮಾಣದ ಬಗ್ಗೆ ಮಂಜೂರಾತಿ ನೀಡಲಾಗಿದೆ. ಇದಲ್ಲದೆ ಜಿಲ್ಲಾ ಕೇಂದ್ರದಲ್ಲಿ 16.60 ಕೋಟಿ ಅಂದಾಜು ವೆಚ್ಚದಲ್ಲಿ ಜಿಲ್ಲಾ ಸಂಕೀರ್ಣ ಕಟ್ಟಡ ನಿರ್ಮಿಸಲಾಗುತ್ತಿದೆ.

ಇ) ಅ) ಜಿಲ್ಲಾಧಿಕಾರಿಗಳ ವಸತಿ ಗೃಹವನ್ನು ಪೂರ್ಣಗೊಳಿಸಲಾಗಿದೆ.

ಆ) ಕಛೇರಿ ಆಧುನೀಕರಣದಲ್ಲಿ ನೀಡಿರುವ ಅನುದಾನದಲ್ಲಿ ಆಧುನೀಕರಣಕ್ಕೆ ಅವಶ್ಯವಾದ ಯಂತ್ರೋಪಕರಣ ಪೀಠೋಪಕರಣ ಮತ್ತು ಕಾನೂನು ಪುಸ್ತಕಗಳನ್ನು ಖರೀದಿಸಲಾಗಿದೆ.

* ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ತಹಶೀಲ್ದಾರರು ಮತ್ತು ಉಪ ವಿಭಾಗಾಧಿಕಾರಿಗಳ ಹಾಗೂ ಸಿಬ್ಬಂದಿ ವಸತಿಗೃಹಗಳಿಗಾಗಿ ರೂ. 80.00 ವೆಚ್ಚದಲ್ಲಿ ನಿರ್ಮಿಸುತ್ತಿದ್ದು, ಕಾಮಗಾರಿಗಳನ್ನು ಕರ್ನಾಟಕ ಭೂ ಸೇನಾ ನಿಗಮಕ್ಕೆ ವಹಿಸಿಕೊಡಲಾಗಿದೆ. ನಿರ್ಮಾಣವು ಪೂರ್ಣಗೊಳ್ಳುವ ಹಂತದಲ್ಲಿದೆ.
* ಸರ್ಕಾರವು ಜಿಲ್ಲೆಯ ಜಿಲ್ಲಾ ಕೇಂದ್ರ ತಾಲ್ಲೂಕು ಕೇಂದ್ರ ಹೋಬಳಿ ಕೇಂದ್ರಗಳಲ್ಲಿ ಅಧಿಕಾರಿ/ನೌಕರರಿಗೆ ವಸತಿ ಗೃಹಗಳ ನಿರ್ಮಾಣವನ್ನು ಸುಮಾರು 5.06 ಕೋಟಿ ವೆಚ್ಚದಲ್ಲಿ ನಿರ್ಮಿಸಲು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ಸಂಸ್ಥೆಗೆ ವಹಿಸಿರುತ್ತದೆ.
* ಚಾಮರಾಜನಗರ ಜಿಲ್ಲಾ ಕೇಂದ್ರದಲ್ಲಿ ಜಿಲ್ಲಾ ಮಟ್ಟದ ಕಛೇರಿಗಳ ಜಿಲ್ಲಾ ಸಂಕೀರ್ಣ ನಿರ್ಮಾಣ ಕಾರ್ಯವನ್ನು ಅಂದಾಜು 16.70 ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಂಡು ನಿರ್ಮಾಣ ಕಾರ್ಯವನ್ನು ಕರ್ನಾಟಕ ಗೃಹ ಮಂಡಳಿಗೆ ವಹಿಸಿಕೊಡಲಾಗಿದೆ. ಕಾಮಗಾರಿಯು ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ.

869(1463) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ): ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ಕುದುರೆ ಜೂಜಿನ ಮೈದಾನವನ್ನು ಬೇರೆ ಕಡೆಗೆ ಸ್ಥಳಾಂತರಿಸಲು ಸರ್ಕಾರ ಆಲೋಚಿಸಿದೆಯೇ?